# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 287 |
| ಉತ್ತರಿಸಬೇಕಾದ ದಿನಾಂಕ | : | 12/07/2018 |
| ಸದಸ್ಯರ ಹೆಸರು | : | ಶ್ರೀ ಕೆ. ಟಿ. ಶ್ರೀಕಂಠೇಗೌಡ |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ). | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ನೀಡಬೇಕಾದ ಕಾಲ್ಪನಿಕ ವೇತನ ಬಡ್ತಿ ವಿಚಾರದಲ್ಲಿ ಶ್ರೀ ಬಸವರಾಜ ಹೊರಟ್ಟಿ ರವರ ಅಧ್ಯಕ್ಷತೆಯಲ್ಲಿ ರಚಿಸಲ್ಪಟ್ಟಿದ್ದ ಸಮಿತಿಯು ಯಾವಾಗ ವರದಿ ನೀಡಿದೆ; | ಶ್ರೀ ಬಸವರಾಜ ಹೊರಟ್ಟಿ ಇವರ ಅಧ್ಯಕ್ಷತೆಯಲ್ಲಿ ರಚಿಸಲ್ಪಟ್ಟ ಕಾಲ್ಪನಿಕ ವೇತನ ಸಮಿತಿಯು 1ನೇ ವರದಿಯನ್ನು ದಿನಾಂಕ : 17/03/2015ರಂದು ಮತ್ತು 2ನೇ ವರದಿಯನ್ನು ದಿನಾಂಕ : 06/02/2018ರಂದು ಸಲ್ಲಿಸಿರುತ್ತಾರೆ. |
| ಆ). | ಸರ್ಕಾರಕ್ಕೆ ವರದಿ ನೀಡಿದ್ದಲ್ಲಿ, ಈ ವರದಿಯಲ್ಲಿನ ಪ್ರಮುಖ ಅಂಶಗಳೇನು; (ವಿವರ ನೀಡುವುದು) | ದಿನಾಂಕ : 17–03–2015ರಂದು ಸಲ್ಲಿಸಿರುವ ವರದಿಯಲ್ಲಿನ ಪ್ರಮುಖ ಅಂಶಗಳು ಈ ಕೆಳಗಿನಂತಿದೆ :–<br>1. ವಿಧೇಯಕ 2014ನ್ನು ದಿನಾಂಕ : 01ನೇ ಜೂನ್ 1995ರ ಬದಲಾಗಿ ದಿನಾಂಕ : 12–02–2014ರಿಂದ ಜಾರಿಗೆ ಬರುವಂತೆ ತಿದ್ದುಪಡಿ ಮಾಡಲು;<br>2. ಈಗ ರದ್ದಾಗಿರುವ ಆದೇಶದನ್ವಯ ಸೇವಾ ಸೌಲಭ್ಯಗಳನ್ನು ಪಾವತಿ ಮಾಡಲಾದ ಯಾವುದೇ ಮೊತ್ತವನ್ನು ವಸೂಲು ಮಾಡದಿರಲು;<br>3. ನಿವೃತ್ತಿ ಹೊಂದಿರುವ ಶಿಕ್ಷಕರಿಗೆ ಸಂಬಂಧಿಸಿದಂತೆ ಪಿಂಚಣಿ ನಿಗಧಿ ಮಾಡುವಾಗ ಅವರು ಅನುದಾನರಹಿತ ಅವಧಿಯ ಸೇವೆಯನ್ನು ಹೊರತುಪಡಿಸಿ ಪಿಂಚಣಿಯನ್ನು ನಿಗಧಿ ಪಡಿಸುತ್ತಿದ್ದು, ಮತ್ತು ಈಗಾಗಲೇ ಅನುದಾನರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ಪಿಂಚಣಿಗೆ ನಿಗಧಿಪಡಿಸಿರುವ ಸೌಲಭ್ಯವನ್ನು ಹಿಂಪಡೆದು ಕಡಿತಗೊಳಿಸದಂತೆ ಆದೇಶ ಹೊರಡಿಸುವಂತೆ;<br>4. ಕಾಲ್ಪನಿಕ ವೇತನ ಸೌಲಭ್ಯದಿಂದ ಸುಮಾರು 25 ಸಾವಿರ ನೌಕರರು ವಂಚಿತರಾಗಲಿದ್ದು, ವಾರ್ಷಿಕವಾಗಿ ರೂ. 351 ಕೋಟಿಗಳು ಕಾಲ್ಪನಿಕ ವೇತನಕ್ಕೆ ತಗುಲಲಿದ್ದು, ಸಮಸ್ಯೆಗೆ ಅಂತಿಮ ಪರಿಹಾರ ನೀಡಲು ವಿಧೇಯಕಕ್ಕೆ ಆಡಳಿತಾತ್ಮಕ ಆದೇಶ ಹೊರಡಿಸುವುದು.<br><br>ದಿನಾಂಕ : 06/02/2018ರಂದು ಸಲ್ಲಿಸಿರುವ ವರದಿಯಲ್ಲಿನ ಪ್ರಮುಖ ಅಂಶಗಳು ಈ ಕೆಳಗಿನಂತಿದೆ :–<br>a) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅನುದಾನಿತ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ನಿಗದಿ ಮಾಡಿ, ವೇತನವನ್ನು ಪುನರ್ ನಿಗದಿಪಡಿಸಿ ವೇತನ ಸೌಲಭ್ಯವನ್ನು ಹಾಗೂ ಪಿಂಚಣಿ, ಗ್ರಾಚ್ಯುಟಿ ಸೌಲಭ್ಯವನ್ನು ನೀಡುವುದು;<br>b) ಅನುದಾನರಹಿತ ಅವಧಿಯನ್ನು ಪರಿಗಣಿಸಿ ಪದೋನ್ನತಿ, time bound ಹಾಗೂ ಪ್ಲೇಸ್‌ಮೆಂಟ್ ಸೌಲಭ್ಯವನ್ನು ನೀಡುವುದು;<br>c) ಕಾಲ್ಪನಿಕ ವೇತನ ನಿಗದಿಪಡಿಸಿದ ನಂತರ ಯಾವುದೇ ನೌಕರರು ಹಿಂದಿನ ಯಾವುದೇ ಬಾಕಿಯನ್ನು ಕೇಳುವಂತಿಲ್ಲ; |

| | | |
|---|---|---|
| | | d) ನ್ಯಾಯಾಲಯದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಾವೆ ಹೂಡಿರುವವರು ತಮ್ಮ ಪ್ರಕರಣಗಳನ್ನು ವಾಪಸ್ ಪಡೆದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆಂಬ ಅಂಶವನ್ನು ಇಲಾಖೆಯ ಆದೇಶದಲ್ಲಿ ಸ್ಪಷ್ಟಪಡಿಸುವುದು;<br>e) ಈಗಾಗಲೇ ಈ ಸೌಲಭ್ಯವನ್ನು ಪಡೆಯುತ್ತಿರುವವರಿಗೆ ಯಥಾವತ್ತಾಗಿ ಮುಂದುವರೆಸುವುದು ಹಾಗೂ ಈಗಾಗಲೇ ಆರ್ಥಿಕ ಸೌಲಭ್ಯವನ್ನು ಪಡೆದು ನಿವೃತ್ತಿ ಆಗಿರುವ/ಆಗಲಿರುವ ನೌಕರರಿಗೆ ಯಾವುದೇ ರೀತಿಯ ಆರ್ಥಿಕ ಕಡಿತವನ್ನು ಮಾಡಬಾರದು. ನಿವೃತ್ತಿ ವೇತನ ನಿಗದಿಪಡಿಸುವಾಗ ಅನುದಾನರಹಿತ ಅವಧಿಯನ್ನು ಕಡಿತಗೊಳಿಸಿ ಪುನರ್‌ನಿಗದಿ ಪಡಿಸಬಾರದು;<br>f) ನಿವೃತ್ತರಾಗುತ್ತಿರುವವರಿಗೆ ನಿವೃತ್ತಿ ಉಪದಾನವನ್ನು ಕಡಿತಗೊಳಿಸದಂತೆ ಸರ್ಕಾರಿ ಆದೇಶ ಹೊರಡಿಸುವುದು; |
| ಇ) | ಸದರಿ ವರದಿಯನ್ನು ಜಾರಿಗೆ ತರಲಾಗುವುದು- ಯಾವಾಗ? | ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ದಿನಾಂಕ : 01-06-1995ರಿಂದ ಅನ್ವಯವಾಗುವಂತೆ ದಿನಾಂಕ : 12/02/2014ರ ಅಧಿಸೂಚನೆ ಸಂಖ್ಯೆ : ಇಡಿ 60 ಸಂವ್ಯಶಾಇ 2013ರ ಮೂಲಕ ಜಾರಿಗೆ ತರಲಾಗಿದೆ. ಸದರಿ ಅಧಿನಿಯಮವನ್ನು ಪ್ರಶ್ನಿಸಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ, ಇಲ್ಲಿ ಸಲ್ಲಿಸಿದ್ದ ರಿಟ್ ಅರ್ಜಿಯಾದ 21216/2014 ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ : 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ : 10/07/2015ರಂದು ತೀರ್ಪು ನೀಡಿ ಪ್ರಸ್ತಾಪಿತ ಅಧಿನಿಯಮವನ್ನು "struck down" ಮಾಡಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅಪೀಲು ಸಂಖ್ಯೆ : 2476/2015 ಮತ್ತು 2467/2015ನ್ನು ದಾಖಲಿಸಿದೆ. ಸರ್ಕಾರವು ಸಲ್ಲಿಸಿದ ಅಪೀಲಿನಲ್ಲಿ ಮಾನ್ಯ ನ್ಯಾಯಾಲಯವು ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ : 27-11-2015ರಂದು ತಡೆಯಾಜ್ಞೆ ನೀಡಿರುತ್ತದೆ. ಪ್ರಕರಣವು ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. |

**(ಸಂಖ್ಯೆ : ಇಡಿ 384 ಎಸ್‌ಇಎಸ್ 2018)**

(ಎನ್. ಮಹೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.